All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

04.09.2026 19.35 hrs

<>><><*><><<>

ಮುಖ್ಯಾಂಶಗಳು

- ನ್ಯಾಯಾಂಗ ಅಧಿಕಾರಿಗಳ ನಿವೃತ್ತಿ ವಯೋಮಿತಿ ೬೨ಕ್ಕೆ ಏರಿಸಲು ಕರ್ನಾಟಕ ಸೇರಿದಂತೆ ಏಳು ರಾಜ್ಯಗಳಿಗೆ ಸುಪ್ರೀಂಕೋರ್ಟ್ ನಿರ್ದೇಶನ

- ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತ-ಫ್ರಾನ್ಸ್ ಸಹಕಾರ ಮತ್ತಷ್ಟು ಬಲಪಡಿಸಲು ಒತ್ತು; ಇದೇ ೭ರಿಂದ ಬೆಂಗಳೂರಿನಲ್ಲಿ ಬಾಹ್ಯಾಕಾಶ ಎಕ್ಸ್‌ಪೋ

- ದೇಶಾದ್ಯಂತ ಕೃಷ್ಣಜನ್ಮಾಷ್ಟಮಿ ಸಂಭ್ರಮ; ಉಡುಪಿ ವಿಟ್ಲಪಿಂಡಿಗೆ ಸಜ್ಜು

- ಚೀನಾ ಮಾಸ್ಟರ್ಸ್ ಬ್ಯಾಡ್ಮಿಂಟನ್: ಸೆಮಿಫೈನಲ್ ಪ್ರವೇಶಿಸಿದ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ

- ವಿಯೆಟ್ನಾಂ ಪಿಕಲ್‌ಬಾಲ್ ವಿಶ್ವಕಪ್; ೬ ಚಿನ್ನ ಸೇರಿ ೩೭ ಪದಕ ಗೆದ್ದ ಭಾರತ

<>><><*><><<>

ನ್ಯಾಯಾಂಗ ಅಧಿಕಾರಿಗಳ ನಿವೃತ್ತಿ ವಯೋಮಿತಿಯನ್ನು ೬೦ರಿಂದ ೬೨ ವರ್ಷಗಳಿಗೆ ಹೆಚ್ಚಿಸುವಂತೆ ಸುಪ್ರೀಂ ಕೋರ್ಟ್ ಏಳು ರಾಜ್ಯಗಳಿಗೆ ನಿರ್ದೇಶನ ನೀಡಿದೆ. ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್, ನ್ಯಾಯಮೂರ್ತಿಗಳಾದ ಜಾಯಮಲ್ಯ ಬಾಗ್ಚಿ ಮತ್ತು ವಿ.ಮೋಹನಾ ಅವರನ್ನೊಳಗೊಂಡ ಪೀಠವು ಕರ್ನಾಟಕ, ಛತ್ತೀಸ್‌ಗಢ, ಮಧ್ಯಪ್ರದೇಶ, ಮಹಾರಾಷ್ಟ್ರ, ಸಿಕ್ಕಿಂ, ತಮಿಳುನಾಡು ಮತ್ತು ಪಶ್ಚಿಮ ಬಂಗಾಳ ರಾಜ್ಯಗಳು ತಮ್ಮ ಸೇವಾ ನಿಯಮಗಳಿಗೆ ತಿದ್ದುಪಡಿ ತಂದು ನಿವೃತ್ತಿ ವಯೋಮಿತಿಯನ್ನು ಅಧಿಕೃತವಾಗಿ ೬೨ ವರ್ಷಗಳಿಗೆ ಹೆಚ್ಚಿಸುವಂತೆ ನಿರ್ದೇಶಿಸಿದೆ. ೬೦ ವರ್ಷ ವಯಸ್ಸು ತಲುಪುವ ನ್ಯಾಯಾಂಗ ಅಧಿಕಾರಿಗಳು ೬೨ ವರ್ಷ ವಯಸ್ಸಿನವರೆಗೆ ಸೇವೆ ಮುಂದುವರಿಸಲು ಸಂಬಂಧಪಟ್ಟ ಹೈಕೋರ್ಟ್‌ನಿಂದ ಸಾಮರ್ಥ್ಯ ಮತ್ತು ಕಾರ್ಯಕ್ಷಮತೆಯ ಮೌಲ್ಯಮಾಪನಕ್ಕೆ ಒಳಗಾಗಬೇಕೆಂದು ಸುಪ್ರೀಂ ಕೋರ್ಟ್ ಸ್ಪಷ್ಟಪಡಿಸಿದೆ. ಇದೇ ವೇಳೆ, ೨೦೨೬ರ ಮಾರ್ಚ್ ೩೧ರಂದು ಅಥವಾ ನಂತರ ನಿವೃತ್ತರಾದ ಈ ರಾಜ್ಯಗಳ ನ್ಯಾಯಾಂಗ ಅಧಿಕಾರಿಗಳಿಗೆ ಮತ್ತೆ ನ್ಯಾಯಾಂಗ ಸೇವೆಗೆ ಸೇರ್ಪಡೆಯಾಗಲು ಸೀಮಿತ ಅವಕಾಶವನ್ನು ನ್ಯಾಯಾಲಯ ನೀಡಿದೆ. ಆದರೆ, ಅಂತಹ ಅಧಿಕಾರಿಗಳು ನಿವೃತ್ತಿಯ ಬಳಿಕ ಕೇಂದ್ರ

ಅಥವಾ ರಾಜ್ಯ ಸರ್ಕಾರದ ಮತ್ತೊಂದು ಸರ್ಕಾರಿ ಹುದ್ದೆ ಅಥವಾ ಲಾಭದ ಹುದ್ದೆಯಾಗಿರುವ ಯಾವುದೇ ಉದ್ಯೋಗವನ್ನು ಸ್ವೀಕರಿಸಿರಬಾರದು ಎಂದು ನ್ಯಾಯಾಲಯ ತಿಳಿಸಿದೆ. ಈ ಸಂಬಂಧ ಏಳು ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳು ಎರಡು ವಾರಗಳೊಳಗೆ ಕ್ರಮ ಕೈಗೊಂಡು ಅನುಸರಣಾ ವರದಿ ಸಲ್ಲಿಸುವಂತೆ ಸುಪ್ರೀಂ ಕೋರ್ಟ್ ಸೂಚಿಸಿದೆ. ಜಿಲ್ಲಾ ನ್ಯಾಯಾಂಗ ವ್ಯವಸ್ಥೆಯಲ್ಲಿ ಮಂಜೂರಾದ ಹುದ್ದೆಗಳು ಮತ್ತು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ನ್ಯಾಯಾಧೀಶರ ಸಂಖ್ಯೆಯ ನಡುವೆ ಗಮನಾರ್ಹ ಅಂತರವಿದೆ. ನ್ಯಾಯಾಧೀಶರ ಕೊರತೆ ನಿರಂತರವಾಗಿ ಕಂಡುಬರುತ್ತಿರುವ ಹಿನ್ನೆಲೆಯಲ್ಲಿ ಸುಪ್ರೀಂಕೋರ್ಟ್ ಈ ಮಹತ್ವದ ನಿರ್ದೇಶನ ನೀಡಿದೆ.

<>><><*><><<>

ಬಾಹ್ಯಾಕಾಶ ಕ್ಷೇತ್ರದಲ್ಲಿ, ಮಾನವ ಸಹಿತ ಬಾಹ್ಯಾಕಾಶಯಾನ, ಅತ್ಯಾಧುನಿಕ ಬಾಹ್ಯಾಕಾಶ ತಂತ್ರಜ್ಞಾನಗಳು ಸೇರಿದಂತೆ ಭಾರತ-ಫ್ರಾನ್ಸ್ ಸಹಕಾರವನ್ನು ಮತ್ತಷ್ಟು ಆಳಗೊಳಿಸುವ ಕುರಿತು ಕೇಂದ್ರ ಬಾಹ್ಯಾಕಾಶ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಅವರು ಇಂದು ಚರ್ಚೆ ನಡೆಸಿದರು. ಸಭೆಯಲ್ಲಿ ಉಭಯ ದೇಶಗಳ ಬಾಹ್ಯಾಕಾಶ ಸಂಸ್ಥೆಗಳು ಮತ್ತು ಕೈಗಾರಿಕೆಗಳ ನಡುವಿನ ಸಹಭಾಗಿತ್ವವನ್ನು ಹೆಚ್ಚಿಸುವ ಬಗ್ಗೆಯೂ ಮಾತುಕತೆ ನಡೆಯಿತು. ಫ್ರಾನ್ಸ್‌ನ ಉನ್ನತ ಶಿಕ್ಷಣ, ಸಂಶೋಧನೆ ಮತ್ತು ಬಾಹ್ಯಾಕಾಶ ಸಚಿವ ಪ್ರೊಫೆಸರ್ ಫಿಲಿಪ್ ಬಾಪ್ಟಿಸ್ಟ್ ಅವರೊಂದಿಗೆ ಸಚಿವ ಡಾ.ಜಿತೇಂದ್ರ ಸಿಂಗ್ ವಿಡಿಯೊ ಕಾನ್ಫರೆನ್ಸ್ ಮೂಲಕ ದ್ವಿಪಕ್ಷೀಯ ಸಭೆ ನಡೆಸಿದರು. ಪ್ಯಾರಿಸ್‌ನಲ್ಲಿ ಇದೇ ೯ರಂದು ಆರಂಭವಾಗಲಿರುವ ಅಂತಾರಾಷ್ಟ್ರೀಯ ಬಾಹ್ಯಾಕಾಶ ಶೃಂಗಸಭೆಯಲ್ಲಿ ಭಾರತದ ಭಾಗವಹಿಸುವಿಕೆ ಹಾಗೂ ಇದೇ ೭ ರಿಂದ ೯ರವರೆಗೆ ಬೆಂಗಳೂರಿನಲ್ಲಿ ನಡೆಯಲಿರುವ ಬಾಹ್ಯಾಕಾಶ ಎಕ್ಸ್‌ಪೋದಲ್ಲಿ ಫ್ರಾನ್ಸ್‌ನ ಪಾಲ್ಗೊಳ್ಳುವಿಕೆ ಕುರಿತು ಉಭಯ ದೇಶಗಳು ಚರ್ಚಿಸಿವೆ. ಅಂತಾರಾಷ್ಟ್ರೀಯ ಬಾಹ್ಯಾಕಾಶ ಶೃಂಗಸಭೆಯಲ್ಲಿ ಭಾಗವಹಿಸಲು ಹಾಗೂ ಫ್ರಾನ್ಸ್‌ನೊಂದಿಗಿನ ದೀರ್ಘಕಾಲದ ಬಾಹ್ಯಾಕಾಶ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಭಾರತ ಎದುರು ನೋಡುತ್ತಿದೆ ಎಂದು ಜಿತೇಂದ್ರ ಸಿಂಗ್ ಹೇಳಿದ್ದಾರೆ. ಬಾಹ್ಯಾಕಾಶ ವಿಜ್ಞಾನ, ತಂತ್ರಜ್ಞಾನ ಮತ್ತು ಅನ್ವಯಿಕೆಗಳು, ಬಾಹ್ಯಾಕಾಶ ಆರ್ಥಿಕತೆ ಹಾಗೂ ಸುರಕ್ಷಿತ ಬಾಹ್ಯಾಕಾಶ ಕ್ಷೇತ್ರಗಳಿಗೆ ಶೃಂಗಸಭೆಯಲ್ಲಿ ಒತ್ತು ನೀಡಲಾಗುತ್ತಿದ್ದು, ಬಾಹ್ಯಾಕಾಶ ಕ್ಷೇತ್ರದ ಭವಿಷ್ಯದ ಕುರಿತು ಅಂತಾರಾಷ್ಟ್ರೀಯ ಸಂವಾದ ಮತ್ತು ಸಹಕಾರಕ್ಕೆ ಇದು ಮಹತ್ವದ ವೇದಿಕೆಯಾಗಲಿದೆ ಎಂದು ಅವರು ತಿಳಿಸಿದ್ದಾರೆ. ಫ್ರಾನ್ಸ್ ಸಚಿವ ಪ್ರೊಫೆಸರ್ ಬಾಪ್ಟಿಸ್ಟ್, ಭಾರತ-ಫ್ರಾನ್ಸ್ ನಡುವಿನ ಈಗಿರುವ ಬಾಹ್ಯಾಕಾಶ ಸಹಕಾರವನ್ನು ಮತ್ತಷ್ಟು ಬಲಪಡಿಸಿ ವೇಗಗೊಳಿಸುವ ಬಯಕೆಯನ್ನು ವ್ಯಕ್ತಪಡಿಸಿದರು. ಅವರು ಈ ತಿಂಗಳ ಕೊನೆಯಲ್ಲಿ ಭಾರತಕ್ಕೆ ಭೇಟಿ ನೀಡಲಿದ್ದಾರೆ.

<>><><*><><<>

ದೇಶಾದ್ಯಂತ ಇಂದು ಶ್ರೀಕೃಷ್ಣ ಜನ್ಮಾಷ್ಟಮಿಯನ್ನು ಭಕ್ತಿ ಮತ್ತು ಸಡಗರದಿಂದ ಆಚರಿಸಲಾಗುತ್ತಿದೆ. ಭಗವಾನ್ ಶ್ರೀಕೃಷ್ಣನ ಜನ್ಮದಿನದ ಅಂಗವಾಗಿ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ, ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಉತ್ತರ ಪ್ರದೇಶದ ಮಥುರಾ ಮತ್ತು ವೃಂದಾವನ ಹಾಗೂ ಗುಜರಾತ್‌ನ ದ್ವಾರಕಾದಲ್ಲಿ ಪ್ರಮುಖ ಆಚರಣೆಗಳು ನಡೆಯುತ್ತಿವೆ. ಪವಿತ್ರ ಸಂದರ್ಭದ ಅಂಗವಾಗಿ ರಾಷ್ಟ್ರ ರಾಜಧಾನಿಯ ವಿವಿಧ ದೇವಾಲಯಗಳನ್ನು ವರ್ಣರಂಜಿತ ದೀಪಗಳು ಹಾಗೂ ಹೂವುಗಳಿಂದ ಅಲಂಕರಿಸಲಾಗಿದೆ. ಕೇರಳಂನ ಗುರುವಾಯೂರು ಶ್ರೀಕೃಷ್ಣ ದೇವಾಲಯದಲ್ಲಿ ಮುಂಜಾನೆ ೩ ಗಂಟೆಗೆ ಪವಿತ್ರ ನಿರ್ಮಾಲ್ಯ ದರ್ಶನದೊಂದಿಗೆ ಜನ್ಮಾಷ್ಟಮಿ ಆಚರಣೆ ಆರಂಭವಾಯಿತು. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ದೇವಸ್ವಂ ಮಂಡಳಿ ಹಾಗೂ ಪೊಲೀಸರು ಭದ್ರತಾ ವ್ಯವಸ್ಥೆ ಕೈಗೊಂಡಿದ್ದಾರೆ. ಕರ್ನಾಟಕದ ಉಡುಪಿಯಲ್ಲಿ ಕೃಷ್ಣನ ಹುಟ್ಟುಹಬ್ಬದ ಸಂಭ್ರಮಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಶ್ರೀಕೃಷ್ಣ ಜನ್ಮಾಷ್ಟಮಿ ಹಾಗೂ ವಿಟ್ಲಪಿಂಡಿ ವೈಭವಕ್ಕೆ ಸಜ್ಜಾಗುತ್ತಿದೆ. ಶ್ರೀಕೃಷ್ಣ ಮಠದ ರಥಬೀದಿಯಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿದ್ದು, ಗುರ್ಜಿ ಕಂಬಗಳ ಅಳವಡಿಕೆ, ಗೋಪುರ ನಿರ್ಮಾಣ ಸೇರಿದಂತೆ ವಿವಿಧ ಅಲಂಕಾರ ಕಾರ್ಯಗಳು ಪೂರ್ಣಗೊಂಡಿವೆ.

<>><><*><><<>

ಇಟಲಿಯ ಆಡಳಿತ ಇತಿಹಾಸದಲ್ಲಿ ಸತತವಾಗಿ ಅತಿ ದೀರ್ಘಕಾಲ ಸೇವೆ ಸಲ್ಲಿಸಿದ ಪ್ರಧಾನಮಂತ್ರಿಯಾಗಿ ದಾಖಲೆ ನಿರ್ಮಿಸಿರುವ ಜಾರ್ಜಿಯಾ ಮೆಲೋನಿ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಇಂದು ಅಭಿನಂದನೆ ಸಲ್ಲಿಸಿದ್ದಾರೆ. ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ಈ ಮೈಲಿಗಲ್ಲು, ಜಾರ್ಜಿಯಾ ಮೆಲೋನಿ ಅವರ ನಾಯಕತ್ವದ ಮೇಲಿನ ಇಟಲಿ ಜನತೆಯ ವಿಶ್ವಾಸ ಮತ್ತು ನಂಬಿಕೆಯ ಪ್ರತಿಬಿಂಬವಾಗಿದೆ ಎಂದು ಹೇಳಿದ್ದಾರೆ. ಭಾರತದೊಂದಿಗಿನ ಜಾರ್ಜಿಯಾ ಮೆಲೋನಿ ಅವರ ಸ್ನೇಹವು, ಉಭಯ ದೇಶಗಳ ನಡುವೆ ವಿಶೇಷ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದು ಅವರು ಹೇಳಿದ್ದಾರೆ.

<>><><*><><<>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ, ಆಂಧ್ರಪ್ರದೇಶದ ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಇಂದು ಮುಂಜಾನೆ ಜಿಎಸ್‌ಎಲ್‌ವಿ-ಎಫ್೧೭ ಉಡಾವಣಾ ವಾಹಕದ ಮೂಲಕ ಇಒಎಸ್-೫ ಭೂ ವೀಕ್ಷಣಾ ಉಪಗ್ರಹವನ್ನು ಯಶಸ್ವಿಯಾಗಿ ಉಡಾವಣೆ ಮಾಡಿದೆ. ಈ ಯಶಸ್ಸಿಗೆ ಹರ್ಷ ವ್ಯಕ್ತಪಡಿಸಿರುವ ಇಸ್ರೋ ಅಧ್ಯಕ್ಷ ವಿ. ನಾರಾಯಣನ್,

ಇದು ಭಾರತದ ಭೂ ವೀಕ್ಷಣಾ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ, ಭೂ ವೀಕ್ಷಣಾ ಸೇವೆಗಳ ವಿತರಣೆಯನ್ನು ಸುಧಾರಿಸಲಿದೆ ಎಂದು ತಿಳಿಸಿದ್ದಾರೆ.

**ಧ್ವನಿ: ವಿ. ನಾರಾಯಣನ್ ಇಸ್ರೋ ಅಧ್ಯಕ್ಷ ( ೩೨ ಸೆಕೆಂಡುಗಳು)**

<>><><*><><<>

ಶ್ರೀಹರಿಕೋಟಾದಿಂದ ಇಂದು ಜಿಎಸ್‌ಎಲ್‌ವಿ- ಎಫ್೧೭ ವಾಹಕದ ಮೂಲಕ ಇಓಎಸ್-೦೫ ಉಪಗ್ರಹವನ್ನು ಯಶಸ್ವಿಯಾಗಿ ಉಡಾವಣೆ ಮಾಡಿದ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ- ಇಸ್ರೋದ ವಿಜ್ಞಾನಿಗಳನ್ನು ಉಪರಾಷ್ಟ್ರಪತಿ, ಪ್ರಧಾನಮಂತ್ರಿ ಸೇರಿದಂತೆ ಹಲವು ಗಣ್ಯರು ಸಾಮಾಜಿಕ ಮಾಧ್ಯಮದ ಮೂಲಕ ಅಭಿನಂದಿಸಿದ್ದಾರೆ. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಭಾರತದ ಮೊದಲ ಇಮೇಜಿಂಗ್ ಉಪಗ್ರಹ- ಇಓಎಸ್-೫ ಅನ್ನು ಭೂಸ್ಥಿರ ಕಕ್ಷೆಯಿಂದ ಯಶಸ್ವಿಯಾಗಿ ಉಡಾವಣೆ ಮಾಡಿರುವುದು ದೇಶದ ಬಾಹ್ಯಾಕಾಶ ಕ್ಷೇತ್ರದಲ್ಲಿ ಪ್ರಮುಖ ಮೈಲಿಗಲ್ಲಾಗಿದೆ ಎಂದು ಶ್ಲಾಘಿಸಿದ್ದಾರೆ.  ಪ್ರಧಾನಿ ನರೇಂದ್ರ ಮೋದಿ ಅವರು, ಈ ಯಶಸ್ವಿ ಉಡಾವಣೆಯು ಭಾರತದ ಬಾಹ್ಯಾಕಾಶ ಕ್ಷೇತ್ರವನ್ನು ರೂಪಿಸುತ್ತಿರುವ ಶ್ರೇಷ್ಠತೆ, ನಾವೀನ್ಯತೆ ಮತ್ತು ಹೆಚ್ಚುತ್ತಿರುವ ಸಾಮರ್ಥ್ಯಗಳ ಪ್ರತಿಬಿಂಬವಾಗಿದೆ ಎಂದು ಹೇಳಿದ್ದಾರೆ.

<>><><*><><<>

ಶೆನ್‌ಜೆನ್‌ನಲ್ಲಿ ನಡೆಯುತ್ತಿರುವ, ಚೀನಾ ಮಾಸ್ಟರ್ಸ್ ಬ್ಯಾಡ್ಮಿಂಟನ್‌ನಲ್ಲಿ, ಭಾರತದ ಪುರುಷರ ಡಬಲ್ಸ್ ಜೋಡಿ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಅವರು ತಮ್ಮ ನಾಲ್ಕನೇ ಚೀನಾ ಮಾಸ್ಟರ್ಸ್ ಸೆಮಿಫೈನಲ್‌ಗೆ ಪ್ರವೇಶಿಸಿದ್ದಾರೆ. ಡೆನ್ಮಾರ್ಕ್‌ನ ಕಿಮ್ ಅಸ್ಟ್ರಪ್ ಮತ್ತು ಆಂಡರ್ಸ್ ಸ್ಕಾರಪ್ ರಾಸ್ಮುಸ್ಸೆನ್ ಅವರನ್ನು ೨-೧ ಸೆಟ್ ಅಂತರದಿಂದ ಸೋಲಿಸುವ ಮೂಲಕ ಅವರು ಜಯ ಗಳಿಸಿ, ಮುನ್ನಡೆದಿದ್ದಾರೆ.

<>><><*><><<>

ವಿಯೆಟ್ನಾಂನ ಡಾ ನಾಂಗ್‌ನಲ್ಲಿ ನಡೆಯುತ್ತಿರುವ ಪಿಕಲ್‌ಬಾಲ್ ವಿಶ್ವಕಪ್ ೨೦೨೬ರ ಮೊದಲ ದಿನ ತಂಡಗಳ ವಿಭಾಗದಲ್ಲಿ ಭಾರತ ಅಜೇಯವಾಗಿ ಉಳಿದಿದೆ. ಪಂದ್ಯಾವಳಿಯಲ್ಲಿ ಇದುವರೆಗೆ ಭಾರತ, ೬ ಚಿನ್ನ, ೧೬ ಬೆಳ್ಳಿ ಹಾಗೂ ೧೫ ಕಂಚು ಸೇರಿದಂತೆ ಒಟ್ಟು ೩೭ ಪದಕಗಳನ್ನು ಗೆದ್ದಿದೆ. ತಂಡಗಳ ಲೀಗ್ ಹಂತದಲ್ಲಿ ಅಜೇಯವಾಗಿರುವ ಭಾರತ ಸದ್ಯ ಪದಕ ಪಟ್ಟಿಯಲ್ಲಿ ೪ನೇ ಸ್ಥಾನದಲ್ಲಿದೆ. ಈ ತಿಂಗಳ ೬ರವರೆಗೆ ನಡೆಯಲಿರುವ ಪಂದ್ಯಾವಳಿಯಲ್ಲಿ, ಲೀಗ್ ಹಂತ ಅಂತ್ಯಗೊಂಡಿದ್ದು, ಭಾರತವು, ಆಂಟಿಗುವಾ, ಬಾರ್ಬುಡಾ, ಇಸ್ರೇಲ್ ಹಾಗೂ ಜೆಕ್ ಗಣರಾಜ್ಯ ತಂಡಗಳನ್ನು ಮಣಿಸಿದೆ. ಭಾರತದ

ಹಿರಿಯರ ತಂಡವೂ ಉತ್ತಮ ಆರಂಭ ಮಾಡಿದ್ದು, ಜರ್ಮನಿ ಮತ್ತು ನೇಪಾಳ ತಂಡಗಳನ್ನು ಸೋಲಿಸಿ ೩೨ರ ಸುತ್ತಿಗೆ ಮುನ್ನಡೆದಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**